ಚಿಕ್ಕಲ್ಲೂರು ಗ್ರಾಮಕ್ಕೆ ಶಿಂಷಾ ಉಪನದಿಗೆ ಸೇತುವೆ ಬಗ್ಗೆ

೧೧೩೬. ಶ್ರೀ ಜಿ. ಎಸ್. ಶಿವನಂಜಪ್ಪ (ಗುಬ್ಬಿ).— ಮಾನ್ಯ ಲೋಕೋಪಯೋಗಿ, ಅಚ್ಚು ಕಟ್ಟು ಪ್ರದೇಶಾಭಿವೃದ್ಧಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗುಬ್ಬಿ ತಾಲ್ಲೂಕು ಕಡಬಾ ಹೋಬಳಿ ಕಲ್ಲೂರು ಹಾಗೂ ಚಿಕ್ಕಲ್ಲೂರು ಗ್ರಾಮಗಳ ಮಧ್ಯೆ ಶಿಂಷಾ ಉಪನದಿಯು ಹರಿಯುತ್ತಿರುವುದು ನಿಜವೇ ?

ಆ) ಕಲ್ಲೂರಿನಿಂದ ಚಿಕ್ಕಲ್ಲೂರಿಗೆ ಹೋಗಲು ಈ ನದಿಯಿಂದ ಗ್ರಾಮಸ್ಥರಿಗೆ ತೊಂದರೆ ಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಸದರಿ ನದಿಗೆ ಒಂದು ಸೇತುವೆಯನ್ನು ಕಟ್ಟಿಸಿಕೊಡಬೇಕೆಂದು ಸಾರ್ವಜನಿಕರು ಒತ್ತಾಯಿಸುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ? ಆ ಸೇತುವೆ ಕಟ್ಟಿಸಲು ಕ್ರಮ ಕೈಕೊಳ್ಳಲಾಗುವುದೇ ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ, ಕಾಡಾ ಮತ್ತು ನೀರಾವರಿ ಮಂತ್ರಿಗಳು).—

ಅ) ನಿಜ.

ಆ) ಬಂದಿದೆ.

ಇ) ಈ ಸೇತುವೆಯ ನಿರ್ಮಾಣದ ಅಂದಾಜು ಸುಮಾರು ೮ ಲಕ್ಷ ರೂ.ಗಳಾಗುತ್ತದೆ. ಆರ್ಥಿಕ ಲಭ್ಯತೆಯನ್ನಾಧರಿಸಿ ಬರುವ ವರ್ಷಗಳಲ್ಲಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಪರಿಶೀಲಿಸಲಾಗುವುದು

ಮ್ಯಾಕಲವಂಡ್ಲಿ ಚಿಕ್ಕ ನೀರಾವರಿ ಕೆಲಸ ಪ್ರಾರಂಭಿಸುವ ಬಗ್ಗೆ.

೧೧೨೦. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಲೋಕೋಪಯೋಗಿ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಹಾಗೂ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾಂವ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಮ್ಯಾಕಲವಂಡ್ಲಿ ಸಣ್ಣ ನೀರಾವರಿ ಕೆರೆಯನ್ನು ನಿರ್ಮಿಸುವ ಕೆಲಸವನ್ನು ೧೯೮೬-೮೭ನೇ ಆಯವ್ಯಯ ಪಟ್ಟಿಯಲ್ಲಿ ಸೇರಿಸಿದ್ದರೂ ಕೂಡ ಅದಂ ಇದುವರೆಗೆ ಪ್ರಾರಂಭವಾಗಿಲ್ಲದಿರುವುದು ಸರಕಾರದವರ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ, ಸರ್ಕಾರದವರು ಆ ಕೆಲಸವನ್ನು ಯಾವಾಗ ಪ್ರಾರಂಭಿಸುವರು ಮತ್ತು ಈ ಯೋಜನೆ ಮುಗಿಸಲು ಎಷ್ಟು ಕಾಲಾವಕಾಶ ಬೇಕಾಗುವುದಂ ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ಅಂದಾಜಿಗೆ ಮುಂಜೂರಾತಿಯಾದ ನಂತರ, ಕ್ರಮ ತೆಗೆದುಕೊಳ್ಳಲಾಗುವುದಂ.

ವಿಶ್ವವಿದ್ಯಾನಿಲಯಗಳ ಮುದ್ರಣಾಲಯದ ನೌಕರರಿಗೆ ವಿಶ್ರಾಂತಿ ವೇತನದ ಬಗ್ಗೆ

೯೧೧. ಶ್ರೀ ವೇದಾಂತ ಹೆಮ್ಮಿಗೆ (ಕೃಷ್ಣರಾಜ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ಎಷ್ಟು ವಿಶ್ವವಿದ್ಯಾನಿಲಯಗಳ ಮುದ್ರಣಾಲಯದ ನೌಕರರಿಗೆ ವಿಶ್ರಾಂತಿ ವೇತನ ನೀಡಲಾಗುತ್ತಿದೆ ?